## ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 19(53)
**ಸದಸ್ಯರ ಹೆಸರು** : ಶ್ರೀ ಎಸ್.ಎಲ್ ಭೋಜೇಗೌಡ (ಶಿಕ್ಷಕರ ಕ್ಷೇತ್ರ)
**ಉತ್ತರಿಸುವ ದಿನಾಂಕ** : 12.09.2022
**ಉತ್ತರಿಸುವ ಸಚಿವರು** : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಅನುದಾನಿತ ಶಾಲಾ-ಕಾಲೇಜುಗಳಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ನಿಯಮವನ್ನು ವಿಧಿಸಿದೆ; | ಪ್ರಾಥಮಿಕ ಪ್ರೌಢ ಶಾಲಾ ಶಿಕ್ಷಕರ ನೇಮಕಾತಿ ಅನುದಾನಿತ ಶಾಲೆಗಳ ಈ ಹುದ್ದೆಗಳನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983ರ ನಿಯಮ 1999ರ ಕಲಂ (3) (4) (5) ಮತ್ತು (6) ಹಾಗೂ ತಿದ್ದುಪಡಿ ನಿಯಮ 2008ರ ಅನೆಕ್ಷರ್ (1)ರನ್ವಯ ಹುದ್ದೆಗಳನ್ನು ಭರ್ತಿಸಲು ಕ್ರಮವಹಿಸಲಾಗುತ್ತಿದೆ.<br><br>ರಾಜ್ಯದಲ್ಲಿರುವ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್.ಇ.ಪಿ 2017, ದಿನಾಂಕ:25-09-2018 ರಲ್ಲಿ ಅವಕಾಶ ಕಲ್ಪಿಸಲಾಗಿದೆ.<br><br>**ಅನುದಾನಿತ ಪದವಿ ಪೂರ್ವ ಉಪನ್ಯಾಸಕರ ನೇಮಕಾತಿ**<br><br>ರಾಜ್ಯದ ಅನುದಾನಿತ ಶಾಲಾ-ಕಾಲೇಜುಗಳಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಈ ಕೆಳಕಂಡ ನಿಯಮವನ್ನು ರೂಪಿಸಿರುತ್ತದೆ:-<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 144 ಟಿಪಿಯು 2016, ದಿನಾಂಕ:09-02-2017, 12-06-2017, 12-09-2017, 23-07-2021 ಮತ್ತು 02-08-2021ರ ವಿವಿಧ ಆದೇಶಗಳಲ್ಲಿ ದಿನಾಂಕ 31-12.2015 ರವರೆಗೆ ವಿವಿಧ ಕಾರಣಗಳಿಂದ ತೆರವಾದ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ನಿಗದಿತ ಕಾರ್ಯಭಾರವಿರುವ ಬೋಧಕ ಹುದ್ದೆಗಳಿಗೆ ಆರ್ಥಿಕ ಮಿತವ್ಯಯವನ್ನು ಸಡಿಲಿಸಿ ಭರ್ತಿ ಮಾಡಲು ಅವಕಾಶ ಕಲ್ಪಿಸಿದೆ. |
| ಆ) | ಅನುದಾನಿತ ಶಾಲಾ-ಕಾಲೇಜುಗಳಲ್ಲಿ ಪ್ರಸ್ತುತ ಇರುವ ನಿಯಮಗಳನ್ನು ಸಡಿಲಗೊಳಿಸಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಸಾಲಿನಿಂದ ಕ್ರಮವಹಿಸಲಾಗುವುದು; | ಸರ್ಕಾರದ ಪತ್ರ ಸಂಖ್ಯೆ:ಇಪಿ 59 ಎಸ್‌ಇಎಸ್ 2020, ದಿನಾಂಕ:05.07.2021, ದಿನಾಂಕ: 30.06.2022 ಹಾಗೂ ದಿನಾಂಕ:02.08.2022ರಲ್ಲಿ ದಿನಾಂಕ:31.12.2015 ರವರೆಗೆ ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾಗಿರುವ ಒಟ್ಟು 2131 ಹುದ್ದೆಗಳನ್ನು ಭರ್ತಿ ಮಾಡಿ ಸಹಾಯಾನುದಾನಕ್ಕೆ ಒಳಪಡಿಸಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.<br><br>ಸರ್ಕಾರ ನೇಮಕಾತಿ ನಿಯಮಗಳನ್ನು ಸಡಿಲಗೊಳಿಸಲು ಉದ್ದೇಶಿಸಿರುವುದಿಲ್ಲ. |

| | | |
|---|---|---|
| ಇ) | ಈ ನಿಯಮಗಳನ್ನು ಕಡಿತಗೊಳಿಸುವುದರಿಂದ ರಾಜ್ಯದ ಎಲ್ಲಾ ಅನುದಾನಿತ ಶಾಲಾ-ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಿದಂತಾಗುತ್ತದೆಯೇ? (ಮಾಹಿತಿ ಒದಗಿಸುವುದು) | ಮೇಲಿನಂತೆ ಉದ್ಭವಿಸುವುದಿಲ್ಲ. |

**ಇಪಿ 421 ಎಸ್‌ಇಎಸ್ 2022**

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು